# ದಾವಣಗೆರೆ ವಿಶ್ವವಿದ್ಯಾನಿಲಯ
# DAVANGERE UNIVERSITY

ಕುಲಸಚಿವ (ಪರೀಕ್ಷಾಂಗ) ರವರ ಕಚೇರಿ,
ಶಿವಗಂಗೋತ್ರಿ, ದಾವಣಗೆರೆ-577007.
ದೂರವಾಣಿ ಸಂಖ್ಯೆ: 08192-208420/208104.

Office of the Registrar (Evaluation)
Shivagangothri, Davangere -577007.
Phone No. 08192-208420/208104.

Email: examination@davangereuniversity.ac.in / registrarevalutiondvg2@gmail.com


ಸಂಖ್ಯೆ:ದಾವಿವಿ:ಪವಿ:ಬಿ.ಪಿ.ಇಡಿ-114:2025-26/950 ದಿನಾಂಕ:11.07.2025

## -: ಪ್ರಕಟಣೆ :-

ವಿಷಯ : ಆಗಸ್ಟ್-2025ರ ಮಾಹೆಯಲ್ಲಿ ನಡೆಯಲಿರುವ ಬಿ.ಪಿ.ಇಡಿ., ಪದವಿಯ ದ್ವಿತೀಯ ಮತ್ತು ಚತುರ್ಥ ಸೆಮಿಸ್ಟರ್‌ನ ಪರೀಕ್ಷೆಗಳಿಗೆ UUCMS ತಂತ್ರಾಂಶದ ಮೂಲಕ ಪರೀಕ್ಷಾ ಅರ್ಜಿ ಸಲ್ಲಿಸುವ ಹಾಗೂ ಶುಲ್ಕ ಪಾವತಿಸುವ ಕುರಿತು.

ಉಲ್ಲೇಖ : 1. ಅಧಿಸೂಚನೆ ಸಂಖ್ಯೆ:ದಾವಿವಿ/ಶೈ/83/2024-25/2735, ದಿನಾಂಕ:25.10.2024
2. ಮಾನ್ಯ ಕುಲಪತಿಗಳ ಅನುಮೋದನೆ ದಿನಾಂಕ:11.07.2025

*****

ವಿಶ್ವವಿದ್ಯಾನಿಲಯದ ವ್ಯಾಪ್ತಿಗೊಳಪಡುವ ಎಲ್ಲಾ ಬಿ.ಪಿ.ಇಡಿ., ಕಾಲೇಜುಗಳ ಪ್ರಾಂಶುಪಾಲರುಗಳಿಗೆ ಈ ಮೂಲಕ ತಿಳಿಯಪಡಿಸುವುದೇನೆಂದರೆ, ಉಲ್ಲೇಖಿತ (01)ರ ಶೈಕ್ಷಣಿಕ ಅಧಿಸೂಚನೆಯನ್ವಯ ಆಗಸ್ಟ್-2025ರ ಮಾಹೆಯಲ್ಲಿ ನಡೆಯಲಿರುವ ಬಿ.ಪಿ.ಇಡಿ ಪದವಿಯ ರೆಗ್ಯೂಲರ್ ಮತ್ತು ರಿಪೀಟರ್ಸ್ ವಿದ್ಯಾರ್ಥಿಗಳಿಗೆ ದ್ವಿತೀಯ ಮತ್ತು ಚತುರ್ಥ ಸೆಮಿಸ್ಟರ್ ಪರೀಕ್ಷೆಗಳಿಗೆ UUCMS ತಂತ್ರಾಂಶದ ಮೂಲಕ ಆನ್‌ಲೈನ್‌ನಲ್ಲಿ ಪರೀಕ್ಷಾ ಅರ್ಜಿ ಸಲ್ಲಿಸುವ ಹಾಗೂ ಪರೀಕ್ಷಾ ಶುಲ್ಕ ಪಾವತಿಸಲು ತಿಳಿಸಲಾಗಿದೆ. ಸದರಿ ವಿದ್ಯಾರ್ಥಿಗಳಿಗೆ ಆಯಾ ಕಾಲೇಜುಗಳನ್ನು ಪರೀಕ್ಷಾ ಕೇಂದ್ರಗಳನ್ನಾಗಿ ನಿಗಧಿಪಡಿಸಲಾಗಿದೆ.

ಪ್ರಾಯೋಗಿಕ/ಲಿಖಿತ ಪರೀಕ್ಷೆಗಳ ವಿವರವಾದ ವೇಳಾಪಟ್ಟಿಯನ್ನು ನಂತರ ಪ್ರಕಟಿಸಲಾಗುವುದು. ಇದಕ್ಕೆ ಪೂರಕವಾದ ಇತರೆ ಮಾಹಿತಿಗಳನ್ನು ಕೆಳಗೆ ನೀಡಲಾಗಿದೆ ಹಾಗೂ ಪರೀಕ್ಷಾ ಶುಲ್ಕವನ್ನು ಡಿಜಿಟಲ್ ಮಾಧ್ಯಮದ ಮೂಲಕ ಸಂದಾಯ ಮಾಡುವುದು ಕಡ್ಡಾಯವಾಗಿದೆ.

| ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ದಿನಾಂಕಗಳು | | |
|---|---|---|
| 1) | ವಿಳಂಬ ಶುಲ್ಕವಿಲ್ಲದೆ | 12.07.2025 ರಿಂದ 18.07.2025 |
| 2) | ವಿಳಂಬ ಶುಲ್ಕ ರೂ.120=00 ರಂತೆ (ಪ್ರತಿ ಸೆಮಿಸ್ಟರ್‌ಗೆ) | 19.07.2025 ರಿಂದ 20.07.2025 |
| 3) | ವಿಳಂಬ ಶುಲ್ಕ ರೂ.600=00 ರಂತೆ (ಪ್ರತಿ ಸೆಮಿಸ್ಟರ್‌ಗೆ) | 21.07.2025 |

**ಶುಲ್ಕದ ವಿವರಗಳು**
**ದ್ವಿತೀಯ ಹಾಗೂ ಚತುರ್ಥ ಸೆಮಿಸ್ಟರ್‌ನ ಬಿ.ಪಿ.ಇಡಿ., ವಿದ್ಯಾರ್ಥಿಗಳಿಗೆ**

| ಕ್ರ. ಸಂ. | ವಿವರ | ಪ್ರಸ್ತುತ ಶುಲ್ಕದ ವಿವರ |
|---|---|---|
| 1 | ಪರೀಕ್ಷಾ ಅರ್ಜಿ ಶುಲ್ಕ | ರೂ. 110=00 |
| 2 | ಪ್ರತಿ ಸೆಮಿಸ್ಟರ್ ಪೂರ್ಣ ಪರೀಕ್ಷೆಗೆ (ಸೆಮಿಸ್ಟರ್ ಎಲ್ಲಾ ಪತ್ರಿಕೆಗಳಿಗೆ ರೂ.1,497=00 ಕ್ಕೆ ಒಳಪಟ್ಟು) | ಪರೀಕ್ಷಾ ಶುಲ್ಕ ರೂ. 1,271=00<br>ಅಂಕಪಟ್ಟಿ ಶುಲ್ಕ ರೂ. 226=00<br>------<br>ಒಟ್ಟು ಶುಲ್ಕ ರೂ. 1,497=00 |
| 3 | ಸೆಮಿಸ್ಟರ್‌ನ ಒಂದು ಪತ್ರಿಕೆಗೆ (ರಿಪೀಟರ್ಸ್ ವಿದ್ಯಾರ್ಥಿಗಳಿಗೆ) | ರೂ. 264=00 |
| 4 | ಪ್ರಾಯೋಗಿಕ ಪರೀಕ್ಷೆಗೆ ಪ್ರತಿ ಪತ್ರಿಕೆಗೆ (ಫೇಲ್ ವಿದ್ಯಾರ್ಥಿಗಳಿಗೆ) | ರೂ. 171=00 |
| 5 | ರಿಪೀಟರ್ಸ್ ವಿದ್ಯಾರ್ಥಿಗಳಿಗೆ ಅಂಕಪಟ್ಟಿ ಶುಲ್ಕ | ರೂ. 226=00 |

## : ವಿದ್ಯಾರ್ಥಿಗಳಿಗೆ ಸೂಚನೆ :

1. ವಿದ್ಯಾರ್ಥಿಗಳು **Online** ಮುಖಾಂತರ ಅರ್ಜಿ ಸಲ್ಲಿಸಲು **https://uucms.karnataka.gov.in/Login/Index** ನಲ್ಲಿ **Student login** ಆಗಿ ಪರೀಕ್ಷೆ ತೆಗೆದುಕೊಳ್ಳುವ ಸೆಮಿಸ್ಟರ್‌ವಾರು/ವಿಷಯವಾರು ಗುರುತು ಮಾಡಿದ ನಂತರ ಶುಲ್ಕ ವಿವರಗಳುಳ್ಳ ಪರೀಕ್ಷಾ ಅರ್ಜಿಯನ್ನು ನೆಟ್ ಬ್ಯಾಂಕಿಂಗ್‌ನಲ್ಲಿ ಶುಲ್ಕಭರಿಸಿದ ನಂತರ ಪ್ರತಿಯನ್ನು ಕಡ್ಡಾಯವಾಗಿ ಕಾಲೇಜಿಗೆ ಸಲ್ಲಿಸಬೇಕು.
2. ವಿದ್ಯಾರ್ಥಿಗಳು ಪರೀಕ್ಷಾ ಶುಲ್ಕವನ್ನು ಪಾವತಿ ಮಾಡುವುದಕ್ಕೆ ಮುಂಚಿತವಾಗಿ ಎಲ್ಲಾ ಮಾಹಿತಿಗಳ ನಿಖರತೆಯನ್ನು ಖಾತರಿಪಡಿಸಿಕೊಳ್ಳಬೇಕು.
3. ವಿದ್ಯಾರ್ಥಿಗಳು ಯಾವುದೇ ಪರೀಕ್ಷೆಯನ್ನು ಪ್ರಥಮ ಅವಕಾಶದಲ್ಲಿ ಬರೆಯುತ್ತಿದ್ದರೆ, ಅಂತಹ ಸಂದರ್ಭದಲ್ಲಿ ಎಲ್ಲಾ ವಿಷಯಗಳನ್ನು ಕಡ್ಡಾಯವಾಗಿ ತೆಗೆದುಕೊಳ್ಳುವುದು.
4. ವಿದ್ಯಾರ್ಥಿಗಳು ಯಾವುದೇ ಪರೀಕ್ಷೆಯನ್ನು ಮರು ಅವಕಾಶದಲ್ಲಿ ಬರೆಯುತ್ತಿದ್ದರೆ, ಅಂತಹ ಸಂದರ್ಭದಲ್ಲಿ ವಿಷಯಗಳ ಆಯ್ಕೆಯು ವಿದ್ಯಾರ್ಥಿಗೆ ಇರುವುದಿಲ್ಲ.
5. ವಿದ್ಯಾರ್ಥಿಗಳು ಪರೀಕ್ಷಾ ಶುಲ್ಕ ಪಾವತಿಸುವುದಕ್ಕೆ ಮುಂಚಿತವಾಗಿ ಪರೀಕ್ಷೆ ಬರೆಯಬೇಕಾದ ವಿಷಯಗಳನ್ನು ಖಚಿತ ಪಡಿಸಿಕೊಳ್ಳುವುದು.
6. ವಿದ್ಯಾರ್ಥಿಗಳಿಗೆ ಪರೀಕ್ಷೆ ಶುಲ್ಕವನ್ನು ಪಾವತಿ ಮಾಡುವ ವಿಧಾನ.
   - ವಿದ್ಯಾರ್ಥಿಯು UUCMS login ಮುಖಾಂತರ Payment Gateway ಸೌಲಭ್ಯವನ್ನು ಬಳಸಿಕೊಂಡು (Debit Card/ Credit Card / Net Banking / Wallet, ಇತ್ಯಾದಿ) ಹಣ ಪಾವತಿಸಬಹುದು.
7. ಪರೀಕ್ಷಾ ಶುಲ್ಕವನ್ನು ಪಾವತಿಸಿದ ನಂತರ ಶೈಕ್ಷಣಿಕ ಅವಧಿ ಮುಗಿಯುವರೆಗೂ ತರಗತಿಗಳಿಗೆ ಹಾಜರಾಗಿ ನಿಯಮಾನುಸಾರ ಹಾಜರಾತಿ ಗಳಿಸುವುದು ಕಡ್ಡಾಯವಾಗಿರುತ್ತದೆ. ಇಲ್ಲವಾದಲ್ಲಿ ಪರೀಕ್ಷೆ ಬರೆಯಲು ಅನರ್ಹರಾಗಿರುತ್ತಾರೆ.

> **ವಿಶೇಷ ಸೂಚನೆ:** ವಿದ್ಯಾರ್ಥಿಗಳು Internet Browsing Center ನ ಮಾಲೀಕರ ಬ್ಯಾಂಕ್ ಖಾತೆಯ ಮೂಲಕ ವಿಶ್ವವಿದ್ಯಾನಿಲಯಕ್ಕೆ ಹಣ ಪಾವತಿಸಿದಲ್ಲಿ ಉಂಟಾಗುವ ತಾಂತ್ರಿಕ ತೊಂದರೆಗಳಿಗೆ ವಿದ್ಯಾರ್ಥಿಗಳೇ ಜವಾಬ್ದಾರರು ಹಾಗೂ ಎರಡು ಬಾರಿ ಶುಲ್ಕ ಪಾವತಿಸಿದ್ದಲ್ಲಿ ಮರುಪಾವತಿಗೆ (No Refund) ಅವಕಾಶವಿರುವುದಿಲ್ಲ.

## : ಪ್ರಾಚಾರ್ಯರಿಗೆ ಸೂಚನೆ :

1. ಕಾಲೇಜಿನ ಪ್ರಾಂಶುಪಾಲರು ಪರೀಕ್ಷೆಗೆ ಸಂಬಂಧಪಟ್ಟ ಎಲ್ಲಾ ಕಾರ್ಯಗಳನ್ನು UUCMS ನ College login ಮುಖಾಂತರ ಮಾಡಬೇಕು.
2. ಕಾಲೇಜಿನ ಪ್ರಾಂಶುಪಾಲರು, ವಿದ್ಯಾರ್ಥಿಗಳು ಪರೀಕ್ಷಾ ಶುಲ್ಕ ಕಟ್ಟುವುದಕ್ಕಿಂತ ಮುಂಚಿತವಾಗಿ ಎಲ್ಲಾ ರೀತಿಯ ಅರ್ಹತೆಗಳು ಹೊಂದಿದ್ದಾರೆ ಎಂದು ಖಚಿತ ಪಡಿಸಿಕೊಳ್ಳಬೇಕು.
3. ಕಾಲೇಜಿನ ಪ್ರಾಂಶುಪಾಲರು **UUCMS** ನ login ಮುಖಾಂತರ ವಿದ್ಯಾರ್ಥಿಗಳ ಪರೀಕ್ಷೆ ಅರ್ಹತೆಯನ್ನು ದೃಢೀಕರಿಸಬೇಕು.
4. ಕಾಲೇಜು ದೃಢೀಕರಿಸಿದ ಮಾಹಿತಿಗಳನ್ನು ವಿದ್ಯಾರ್ಥಿಗಳಿಗೆ UUCMS ನ login ಮುಖಾಂತರ ತಿಳಿಸಲಾಗುವುದು.
5. ರೂ. 2.5 ಲಕ್ಷಗಳ ಆದಾಯಕ್ಕಿಂತ ಮೇಲ್ಪಟ್ಟ ಎಸ್.ಸಿ/ಎಸ್.ಟಿ ವಿದ್ಯಾರ್ಥಿಗಳು ಪೂರ್ಣ ಪರೀಕ್ಷಾ ಶುಲ್ಕ ಪಾವತಿಸಬೇಕು. ಮರುಯತ್ನದ (Repeaters) ಮತ್ತು ದಂಡ ಶುಲ್ಕದೊಂದಿಗೆ ಪರೀಕ್ಷಾ ಅರ್ಜಿ ಸಲ್ಲಿಸುವ ವಿದ್ಯಾರ್ಥಿಗಳಿಗೆ ಯಾವುದೇ ಶುಲ್ಕ ವಿನಾಯಿತಿ ಇರುವುದಿಲ್ಲ.
6. S.S.P ಪೋರ್ಟಲ್ ಮುಖಾಂತರ ಸಮಾಜ ಕಲ್ಯಾಣ ಇಲಾಖೆಯಿಂದ ನೇರವಾಗಿ ಆಯಾ ವಿದ್ಯಾರ್ಥಿಗಳ ಬ್ಯಾಂಕ್ ಖಾತೆಗೆ ವಿದ್ಯಾರ್ಥಿ ವೇತನ ಜಮಾ ಮಾಡಲಾಗುತ್ತಿರುವುದರಿಂದ, ಪರಿಶಿಷ್ಟ ಜಾತಿ: ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳು ಪೂರ್ಣ ಶುಲ್ಕವನ್ನು ಪಾವತಿಸಬೇಕು. ವಿದ್ಯಾರ್ಥಿ ವೇತನಕ್ಕೆ ಅರ್ಜಿ ಸಲ್ಲಿಸದೇ ಇರುವ ವಿದ್ಯಾರ್ಥಿಗಳು/ವಿದ್ಯಾರ್ಥಿ ವೇತನ ಮಂಜೂರಾಗದ ವಿದ್ಯಾರ್ಥಿಗಳು ಪೂರ್ಣ ಪರೀಕ್ಷಾ ಶುಲ್ಕ ಪಾವತಿಸಬೇಕು.
7. ಪ್ರವರ್ಗ-1ಕ್ಕೆ 2.5 ಲಕ್ಷ ಹಾಗೂ ರೂ. 1 ಲಕ್ಷ ಅಥವಾ ಇದಕ್ಕಿಂತ ಕಡಿಮೆ ಕುಟುಂಬದ ವಾರ್ಷಿಕ ಆದಾಯವನ್ನು ಹೊಂದಿರುವ 2ಎ, 2ಬಿ, 3ಎ, 3ಬಿ, ಹಾಗೂ ಇತರೆ Freshers ವಿದ್ಯಾರ್ಥಿಗಳು ಪೂರ್ಣ ಪರೀಕ್ಷಾ ಶುಲ್ಕವನ್ನು ಪಾವತಿಸಬೇಕು. ಆದರೆ, ವಿದ್ಯಾರ್ಥಿಗಳ ಅರ್ಹತೆ ಮತ್ತು ಮೆರಿಟ್ ಆಧರಿಸಿ ಸರ್ಕಾರದ ಅನುದಾನದ ಲಭ್ಯತೆಗೆ ಒಳಪಟ್ಟು ಶುಲ್ಕ ಮರುಬರಿಕೆ ಮೊತ್ತವನ್ನು ಹಿಂದುಳಿದ ವರ್ಗ ಹಾಗೂ ಅಲ್ಪಸಂಖ್ಯಾತರ ಇಲಾಖೆಯಿಂದ ನೇರವಾಗಿ ಆಯಾ ವಿದ್ಯಾರ್ಥಿಗಳ ಬ್ಯಾಂಕ್ ಖಾತೆಗೆ ಎನ್.ಇ.ಎಫ್.ಟಿ ವ್ಯವಸ್ಥೆ ಮೂಲಕ ಜಮಾ ಮಾಡಲಾಗುವುದೆಂದು ಸರ್ಕಾರದ ಆದೇಶ ಸಂಖ್ಯೆ:ಸ.ಕ.ಇ./201/ಬಿ.ಎಂ.ಎಸ್.2011 ಬೆಂಗಳೂರು ದಿನಾಂಕ:23-06-2012ರಲ್ಲಿ ತಿಳಿಸಿರುತ್ತಾರೆ.

8. ವಿದ್ಯಾರ್ಥಿಗಳ ಪರೀಕ್ಷಾ ಪ್ರವೇಶ ಪತ್ರವನ್ನು ವಿಶ್ವವಿದ್ಯಾನಿಲಯದ ನಿರ್ದೇಶಾನುಸಾರ ಕಾಲೇಜುಗಳಲ್ಲಿ ಮುದ್ರಿಸಿ ಒದಗಿಸತಕ್ಕದ್ದು.
9. ವಿಶ್ವವಿದ್ಯಾನಿಲಯವು ಕಾಲೇಜುಗಳಿಗೆ ಒದಗಿಸುವ ಪ್ರಶ್ನೆ ಪತ್ರಿಕೆಗಳ ಸಂಖ್ಯೆಯನ್ನು UUCMS ನ login ಮುಖಾಂತರ ತಿಳಿಸುವುದು. ಕಾಲೇಜುಗಳು ಇದನ್ನು ಪರಿಶೀಲಿಸಿ ಯಾವುದಾದರು ವ್ಯತ್ಯಯವಿದ್ದರೆ ಅದನ್ನು ವಿಶ್ವವಿದ್ಯಾನಿಲಯದ ಅಧಿಕಾರಿಗಳ ಗಮನಕ್ಕೆ ತರುವುದು.
10. Invigilator Dairy ಯನ್ನು (02 ಪ್ರತಿಗಳು) ಆನ್‌ಲೈನ್ ಮೂಲಕವೇ ಸಿದ್ದಪಡಿಸಿಕೊಳ್ಳಬೇಕು ಹಾಗೂ ಆಯಾ ದಿನದ ಉತ್ತರ ಪತ್ರಿಕೆ ಬಂಡಲ್‌ಗಳ ಜೊತೆಯಲ್ಲಿಯೇ 01 ಪ್ರತಿಯನ್ನು ಕಳುಹಿಸಿಕೊಡುವುದು.
11. ಪರೀಕ್ಷೆಗೆ ಗೈರುಹಾಜರಾದ ವಿದ್ಯಾರ್ಥಿಗಳ ನೊಂದಣಿ ಸಂಖ್ಯೆ ಮತ್ತು ವಿಷಯವನ್ನು (QP Code) ಆನ್‌ಲೈನ್ ಮೂಲಕವೇ ನಮೂದಿಸುವುದು.
12. ನಿಯಮಾನುಸಾರ ವಿಶ್ವವಿದ್ಯಾನಿಲಯವು ಅನುಮೋದನೆ ನೀಡಿರುವ ವಿದ್ಯಾರ್ಥಿಗಳಿಂದ ಮಾತ್ರ ಪರೀಕ್ಷಾ ಅರ್ಜಿ ಹಾಗೂ ಶುಲ್ಕ ಸಂಗ್ರಹಿಸಬೇಕು.
13. ಉತ್ತರ ಪತ್ರಿಕೆಗಳ ಬೇಡಿಕೆ ಪಟ್ಟಿಯನ್ನು ಸಹ ದಿನಾಂಕ:25-07-2025 ರೊಳಗಾಗಿ ವಿಶ್ವವಿದ್ಯಾನಿಲಯಕ್ಕೆ ತಪ್ಪದೇ ಸಲ್ಲಿಸತಕ್ಕದ್ದು.
14. UUCMS **ತಂತ್ರಾಂಶದನುಸಾರ ಪರೀಕ್ಷಾ ಪ್ರವೇಶ ಪತ್ರ ಪಡೆಯಲು ಪರೀಕ್ಷಾ ಪೂರ್ವದಲ್ಲೇ ಥಿಯರಿ/ಪ್ರಾಯೋಗಿಕ ವಿಷಯಗಳ ಆಂತರಿಕ ಅಂಕಗಳು ಮತ್ತು ಹಾಜರಾತಿಯನ್ನು ತಂತ್ರಾಂಶದಲ್ಲಿ ನಮೂದಿಸುವುದು ಕಡ್ಡಾಯವಾಗಿರುತ್ತದೆ. ಹಾಗೂ ಫಲಿತಾಂಶ ನೀಡಿದ ನಂತರ ಯಾವುದೇ ತಿದ್ದುಪಡಿ/ ಮಾರ್ಪಾಡುಗಳಿಗೆ ಅವಕಾಶ ಇರುವುದಿಲ್ಲ.**
15. ಯಾವುದೇ ವಿದ್ಯಾರ್ಥಿಯ ಆಂತರಿಕ ಅಂಕಗಳನ್ನು ಆನ್‌ಲೈನ್‌ನಲ್ಲಿ ನಮೂದಿಸದೇ ಬಿಟ್ಟುಹೋದಲ್ಲಿ ಯಾವುದೇ ಕಾರಣಕ್ಕೂ ಹಾರ್ಡ್ ಕಾಪಿಯನ್ನು ನಂತರ ಕಾಲೇಜಿನಿಂದ ಕಳುಹಿಸಿಕೊಟ್ಟಲ್ಲಿ ಅದನ್ನು ಪರಿಗಣಿಸಲಾಗುವುದಿಲ್ಲ ಅಂತಹ ಮನವಿಗಳನ್ನು ತಿರಸ್ಕರಿಸಲಾಗುವುದು.
16. ಪರೀಕ್ಷಾ ಫೀ ಪಾವತಿಸದೇ ಇರುವ ವಿದ್ಯಾರ್ಥಿಗಳನ್ನು ಪರೀಕ್ಷೆ ಬರೆಯಲು ಅನುಮತಿಸಿ ನಂತರದಲ್ಲಿ ಫಲಿತಾಂಶ ಬಾರದ ಬಗ್ಗೆ ದೂರು ನೀಡುವುದನ್ನು ಗಮನಿಸಲಾಗಿದೆ. ಈ ಬಾರಿ ಇಂತಹ ಪ್ರಕರಣಗಳು ಬಾರದಂತೆ ಎಚ್ಚರವಹಿಸಬೇಕು. ಕಾರಣ, ಒಮ್ಮೆ ಪರೀಕ್ಷೆ ಬರೆಸಿದಲ್ಲಿ ಅಭ್ಯರ್ಥಿ ಪಟ್ಟಿಯಲ್ಲಿ ಇಲ್ಲದವರ ಫಲಿತಾಂಶ ನೀಡಲು ಅವಕಾಶವಿರದಂತೆ ಸಾಫ್ಟ್‌ವೇರ್‌ನಲ್ಲಿ ಮಾರ್ಪಾಡು ಮಾಡಿಕೊಳ್ಳಲಾಗಿದೆ. ವಿದ್ಯಾರ್ಥಿಗಳಿಗೆ ಇದನ್ನು ತಿಳಿಸುವುದು.
17. ಪ್ರಸ್ತುತ ಸಾಲಿನಲ್ಲಿ ಪ್ರವೇಶ ಪಡೆದು ಶೈಕ್ಷಣಿಕ ವಿಭಾಗದಿಂದ ಅನುಮೋದನೆಗೊಂಡ ವಿದ್ಯಾರ್ಥಿಗಳನ್ನು ಮಾತ್ರ ಪರೀಕ್ಷೆಗೆ ಹಾಜರುಪಡಿಸುವ ಹೊಣೆಯು ಕಾಲೇಜಿನ ಪ್ರಾಂಶುಪಾಲರದ್ದಾಗಿರುತ್ತದೆ. ತಪ್ಪಿದಲ್ಲಿ ತಮ್ಮನ್ನೆ ನೇರ ಹೊಣೆಗಾರರನ್ನಾಗಿ ಮಾಡಲಾಗುತ್ತದೆ.
18. ಪರೀಕ್ಷೆಗೆ ಗೈರು ಹಾಜರಾದ ವಿದ್ಯಾರ್ಥಿಗಳ ಪಟ್ಟಿಯನ್ನು (Absentee Statement) ಪ್ರತ್ಯೇಕವಾಗಿ ಆಯಾ ದಿನದಂದೇ ವಿಶ್ವವಿದ್ಯಾನಿಲಯಕ್ಕೆ ಕಳುಹಿಸಬೇಕು.
19. ಹೆಚ್ಚಿನ ಮಾಹಿತಿಗಾಗಿ ಕಛೇರಿ ದೂರವಾಣಿ ಸಂಖ್ಯೆ: 6363463991 ಸಂಪರ್ಕಿಸುವುದು. (ಕೊನೆಯ ದಿನಾಂಕದವರೆಗೆ ಅರ್ಜಿ ಸಲ್ಲಿಸಲು ಕಾಯದೇ ಮುಂಚಿತವಾಗಿಯೇ ಆನ್‌ಲೈನ್‌ನಲ್ಲಿ ಸಲ್ಲಿಸುವುದರಿಂದ ಅಂತ್ಯದಲ್ಲಿ ಉಂಟಾಗುವ ಸರ್ವರ್ ದಟ್ಟಣೆಯ ಅಡಚಣೆ ತಪ್ಪಿಸಬಹುದಾಗಿದೆ.)

## : ವಿಶೇಷ ಸೂಚನೆ :

1. ಕೇಂದ್ರ ಸರ್ಕಾರದ ಮಾನವ ಸಂಪನ್ಮೂಲ ಇಲಾಖೆ ಹಾಗೂ ಯು.ಜಿ.ಸಿ.ಯ ಆದೇಶದಂತೆ ವಿದ್ಯಾರ್ಥಿಗಳ ಎಲ್ಲಾ ಶೈಕ್ಷಣಿಕ ದಾಖಲೆಗಳನ್ನು National Academic Depository (NAD)ಗೆ ದಾಖಲಿಸಲಾಗುತ್ತಿದೆ. ಈ ಸಂಬಂಧ ಎಲ್ಲಾ ವಿದ್ಯಾರ್ಥಿಗಳು NADಗೆ ನೋಂದಣಿ ಮಾಡಿಕೊಳ್ಳುವುದು ಕಡ್ಡಾಯವಾಗಿರುತ್ತದೆ. ನೋಂದಣಿ ಮಾಡಿಕೊಂಡ ವಿದ್ಯಾರ್ಥಿಗಳು ತಮ್ಮ ಶೈಕ್ಷಣಿಕ ದಾಖಲೆಗಳನ್ನು NAD ವೆಬ್‌ಸೈಟ್‌ನಲ್ಲಿ ಪಡೆದುಕೊಳ್ಳಲು ಅವಕಾಶ ನೀಡಲಾಗುವುದು.
2. ಎಲ್ಲಾ ವಿದ್ಯಾರ್ಥಿಗಳು ABC IDಯನ್ನು Create ಮಾಡಿಕೊಳ್ಳುವುದು ಕಡ್ಡಾಯವಾಗಿರುತ್ತದೆ. ಹಾಗೂ ಇದನ್ನು ಪ್ರಾಂಶುಪಾಲರು ತಮ್ಮ ಲಾಗಿನ್‌ನಲ್ಲಿ Approve ಮಾಡುವುದು ಕಡ್ಡಾಯವಾಗಿರುತ್ತದೆ.

ಕುಲಸಚಿವ (ಪರೀಕ್ಷಾಂಗ)

ಕುಲಸಚಿವರು (ಪರೀಕ್ಷಾಂಗ)
ದಾವಣಗೆರೆ ವಿಶ್ವವಿದ್ಯಾನಿಲಯ
ಶಿವಗಂಗೋತ್ರಿ, ದಾವಣಗೆರೆ - 577 007

ಗೆ,

ವಿಶ್ವವಿದ್ಯಾನಿಲಯದ ವ್ಯಾಪ್ತಿಗೊಳಪಡುವ ಎಲ್ಲಾ ಬಿ.ಪಿ.ಇಡಿ ಕಾಲೇಜುಗಳ ಪ್ರಾಚಾರ್ಯರುಗಳಿಗೆ. – ವಿದ್ಯಾರ್ಥಿಗಳ ಮಾಹಿತಿಗಾಗಿ ಸೂಚನಾ ಫಲಕದಲ್ಲಿ ಪ್ರಕಟಿಸಲು ಕೋರಿದೆ.

ಪು.ತಿ.ನೋ...

ಪ್ರತಿಗಳು:

1. ಸಮಾಜ ಕಲ್ಯಾಣ ಅಧಿಕಾರಿಗಳು, ಸಮಾಜ ಕಲ್ಯಾಣಾಧಿಕಾರಿಗಳ ಕಛೇರಿ, ದಾವಣಗೆರೆ/ಚಿತ್ರದುರ್ಗ ಜಿಲ್ಲೆ.
2. ಜಿಲ್ಲಾಧಿಕಾರಿಗಳು, ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳ ಕಛೇರಿ, ದಾವಣಗೆರೆ/ಚಿತ್ರದುರ್ಗ ಜಿಲ್ಲೆ.
3. ಆಪ್ತಕಾರ್ಯದರ್ಶಿಗಳು, ಕುಲಪತಿಗಳ/ಕುಲಸಚಿವ(ಆಡಳಿತ) ರವರ ಆಪ್ತ ಕಾರ್ಯಾಲಯ, ದಾವಣಗೆರೆ ವಿಶ್ವವಿದ್ಯಾನಿಲಯ, ಶಿವಗಂಗೋತ್ರಿ, ದಾವಣಗೆರೆ.
4. ಉಪಕುಲಸಚಿವರು ಪರೀಕ್ಷಾಂಗ/ಆಡಳಿತ/ಹಣಕಾಸು ವಿಭಾಗ, ದಾವಣಗೆರೆ ವಿಶ್ವವಿದ್ಯಾನಿಲಯ, ಶಿವಗಂಗೋತ್ರಿ, ದಾವಣಗೆರೆ.
5. ಅಧೀಕ್ಷಕರು/ವಿಷಯ ನಿರ್ವಾಹಕರು, ಪರೀಕ್ಷಾಂಗ ವಿಭಾಗ, ದಾವಣಗೆರೆ ವಿಶ್ವವಿದ್ಯಾನಿಲಯ, ಶಿವಗಂಗೋತ್ರಿ, ದಾವಣಗೆರೆ.
6. ಪ್ರಾದೇಶಿಕ ಮುಖ್ಯಸ್ಥರು, UUCMS ವಿಭಾಗ (ತಂತ್ರಾಂಶ), ದಾವಣಗೆರೆ ವಿಶ್ವವಿದ್ಯಾನಿಲಯ, ದಾವಣಗೆರೆ.
7. ಕಛೇರಿ ಪ್ರತಿ.